# ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಶ್ರೀ ದೇವರಾಜ ಅರಸು ಬಡಾವಣೆ

ಟಮಕ, ಕೋಲಾರ-563 103

ಸಂಖ್ಯೆ: ಬೆಂ.ಉ.ವಿ./ಕು.ಸ.ಕಾ/ಹೊ.ಸಂ/01 /2019-20 ದಿನಾಂಕ: 25.07.2019

**ಅಧಿಸೂಚನೆ**

**ವಿಷಯ: 2019-20ನೇ** ಶೈಕ್ಷಣಿಕ ಸಾಲಿಗೆ, ದೈಹಿಕ ಶಿಕ್ಷಣ ಕಾಲೇಜುಗಳ ಸಂಯೋಜನೆ ನವೀಕರಿಸುವ ಬಗ್ಗೆ.

**ಉಲ್ಲೇಖ:** 1. ವಿದ್ಯಾವಿಷಯಕ ಪರಿಷತ್ತಿನ ಸಭೆಯ ನಿರ್ಣಯ ದಿನಾಂಕ: 30.05.2019.

2. ಕುಲಪತಿಯವರ ಅನುಮೋದನೆ ದಿನಾಂಕ:24.7.2019

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ **2000**ದ **59**ನೇ ಪ್ರಕರಣದ **17**ನೇ ಉಪಬಂಧದಲ್ಲಿ ಪದತ್ತವಾದ ಅಧಿಕಾರದನ್ವಯ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು 2019-20ನೇ ಶೈಕ್ಷಣಿಕ ಸಾಲಿಗೆ, ಕೆಳಕಂಡ ದೈಹಿಕ ಶಿಕ್ಷಣ ಕಾಲೇಜಿನಲ್ಲಿ ನಡೆಸಲಾಗುತ್ತಿರುವ ಬಿ.ಪಿ.ಇಡಿ. ಕೋರ್ಸಿಗೆ ಅದರ ಮುಂದೆ ನಮೂದಿಸಿರುವ ವಿದ್ಯಾರ್ಥಿಪ್ರಮಾಣದೊಂದಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಲಾಗಿದೆ.

| ಕ್ರಮ ಸಂಖ್ಯೆ | ಆಡಳಿತ ಮಂಡಳಿ | ಕಾಲೇಜು | ಕೋರ್ಸು | ವಿದ್ಯಾರ್ಥಿ ಪ್ರಮಾಣ |
|---|---|---|---|---|
| 1. | ಶ್ರೀ .ಕೆ. ವೆಂಕಟಪತಪ್ಪ ಟ್ರಸ್ಟ್, ಚಿಕ್ಕಬಳ್ಳಾಪುರ | ಶ್ರೀ .ಕೆ. ವೆಂಕಟಪತಪ್ಪ ದೈಹಿಕ ಶಿಕ್ಷಣ ಮಹಾವಿದ್ಯಾಲಯ, ಚಿಕ್ಕಬಳ್ಳಾಪುರ – 562 ಸ101. | ಬಿ.ಪಿ.ಇಡಿ. | 50 (ಐವತ್ತು) |
| 2 | ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್, ಶ್ರೀ ಆದಿಚುಂಚನಗಿರಿ ಕ್ಷೇತ್ರ – 571 811, ನಾಗಮಂಡಲ ತಾಲ್ಲೂಕು, ಮಂಡ್ಯ ಜಿಲ್ಲೆ. | ಶ್ರೀ ಜಗದ್ಗುರು ಬಾಲಗಂಗಾಧರನಾಥ ಸ್ವಾಮೀಜಿ ಕಾಲೇಜ್ ಆಫ್ ಫಿಸಿಕಲ್ ಎಜುಕೇಷನ್ ಎಸ್.ಬಿ.ಜೆ.ಸ್. ಕ್ಯಾಂಪಸ್ (ಎಸ್.ಜೆ.ಸಿ.ಐ.ಟಿ), ಚಿಕ್ಕಬಳ್ಳಾಪುರ – 562 101. | ಬಿ.ಪಿ.ಇಡಿ | 50 (ಐವತ್ತು) |
| 3 | ಶ್ರೀ ಭಾರತೀಯ ವಿದ್ಯಾರ್ಥಿನಿಲಯ ಎಜುಕೇಷನ್ ಸೊಸೈಟಿ, ನಂ.55/5. ಶ್ರೀ ಶ್ರೀ ಛೇಂಬರ್ಸ್, 13ನೇ ಮುಖ್ಯರಸ್ತೆ, 30ನೇ ಅಡ್ಡರಸ್ತೆ, 4ನೇಬ್ಲಾಕ್ ಈಸ್ಟ್, ಜಯನಗರ, ಬೆಂಗಳೂರು – 560 011. | ಶ್ರೀ. ಬಿ.ವಿ.ಎನ್. ಕಾಲೇಜ್ ಆಫ್ ಫಿಸಿಕಲ್ ಡಜುಕೇಷನ್, 4ನೇ ಅಡ್ಡರಸ್ತೆ, ರಾಬರ್ಟ್‌ಸನ್ ಪೇಟೆ, ಕೆ.ಜಿ.ಎಫ್ – 563 122, ಕೋಲಾರ ಜಿಲ್ಲೆ. | ಬಿ.ಪಿ.ಇಡಿ | 100 (ನೂರು) |
| 4 | ಸಿ.ಬೈರೇಗೌಡ ಎಜುಕೇಷನಲ್ ಅಂಡ್ ಕಲ್ಚರಲ್ ಟ್ರಸ್ಟ್. ನಂ.75,3ನೇ ಅಡ್ಡರಸ್ತೆ, 2ನೇ ಮುಖ್ಯರಸ್ತೆ, ಕೋಟೆ, ಕೋಲಾರ-563 101. | ಪವನ್ ಕಾಲೇಜ್ ಆಫ್ ಫಿಸಿಕಲ್ ಎಜುಕೇಷನ್, ಪಿ.ಬಿ. ನಂ. 15,ಬೆಂಗಳೂರು – ಚೆನ್ನೈ ಬೈ ಪಾಸ್ ರಸ್ತೆ, ಹಾರೋಹಳ್ಳಿ ಗಾರ್ಡನ್, ಕೋಲಾರ – 563 102. | ಬಿ.ಪಿ.ಇಡಿ | 100 (ಒಂದು ನೂರು) |

ವಿ.ಸೂ: 2019-20ನೇ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ. ಕಾಲೇಜುಗಳಿಗೆ ಸಿಂಡಿಕೇಟು ನಿಧಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಸಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಯ ವರದಿಯಲ್ಲಿ ನಮೂದಿಸಿರುವ ಕೊತರೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು. ಇಲ್ಲವಾದಲ್ಲಿ ಮುಂದಿನ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.

---

**ಷರತ್ತುಗಳು:**

1. ವಿದ್ಯಾರ್ಥಿಗಳ ಪ್ರವೇಶವನ್ನು ಕಾಲಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ಬಿ.ಪಿ.ಇಡಿ. ಕೋರ್ಸುಗಳ ಅಭ್ಯರ್ಥಿಗಳ ಆಯ್ಕೆ ನಿಯಮಗಳನ್ವಯ ಕಟ್ಟು - ನಿಟ್ಟಾಗಿ ಪಡೆಯತಕ್ಕದ್ದು.
2. ಕರ್ನಾಟಕ ಬಿ.ಪಿ.ಇಡಿ. ಕೋರ್ಸುಗಳಿಗೆ ಅಭ್ಯರ್ಥಿಗಳ ಆಯ್ಕೆ ನಿಯಮಗಳು 1999ರ 2(1)ನೇ ನಿಯಮದಡಿಯಲ್ಲಿ ನಿರ್ಧರಿಸಲಾಗಿರುವ ವಿದ್ಯಾರ್ಥಿ ಪ್ರಮಾಣಕ್ಕೆ ಅನುಗುಣವಾಗಿ ಮತ್ತು ಪೂರಕವಾಗಿ ವಿಧಿಸಲಾಗಿರುವ ಷರತ್ತುಗಳಿಗೊಳಪಟ್ಟು ವಿದ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದು.
3. ಕಾಲೇಜುಗಳು ಎನ್.ಸಿ.ಟಿ.ಇ. ಅಧಿನಿಯಮ 1993ರ 14ನೇ ಪ್ರಕರಣದಡಿ ಮಾನ್ಯತೆಯನ್ನು ಹೊದಿರತಕ್ಕದ್ದು.
4. ಕಾಲೇಜುಗಳು ಎಸ್.ಸಿ.ಟಿ.ಇ. ಜಾರಿಗೊಳಿಸಿರುವ ನೋಟೀಸ್‌ನಲ್ಲಿ ನಿರ್ದಿಷ್ಟಪಡಿಸಲಾಗಿರುವ ಷರತ್ತುಗಳನ್ನು ಕಟ್ಟು-ನಿಟ್ಟಾಗಿ ಪೂರೈಸತಕ್ಕದ್ದು ಎನ್.ಸಿ.ಟಿ.ಇ. ಮಾನ್ಯತೆ ಹೊಂದದ ಹೊರತು ಕಾಲೇಜು ವಿದ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದಲ್ಲ.
5. ಕಾಲೇಜುಗಳು ಹೆಸರು, ಕಟ್ಟಡ, ಸ್ಥಳ ಗದಲಾವಣೆಗೆ ಎನ.ಸಿ.ಟಿ.ಇ. ಸರ್ಕಾರ ಮತ್ತು ವಿಶ್ವವಿದ್ಯಾಲಯ ಅನುಮತಿಯನ್ನು ಕಡ್ಡಾಯವಾಗಿ ಪಡೆಯತಕ್ಕದ್ದು.
6. ನಿರ್ದಿಷ್ಟ ವಿನಾಯಿತಿ ನೀಡದ ಹೊರತು ವಿಶ್ವವಿದ್ಯಾಲಯ ಮಂಜೂರು ಮಾಡಿರುವ ಮುಂದುವರಿಕೆ ಸಂಯೋಜನೆ ಮತ್ತು ಎನ್.ಸಿ.ಟಿ.ಇ. ಮಂಜೂರು ಮಾಡಿರುವ ಮಾನ್ಯತೆ ರಹಿತವಾಗಿ ವಿದ್ಯಾರ್ಥಿಗಳ ಪ್ರವೇಶ ಪಡೆಯುವುದು ಕರ್ನಾಟಕ ಮಾನ್ಯತೆರಹಿತ ಮತ್ತು ಅಸಂಯೋಜಿತ ಶಿಕ್ಷಣ ಸಂಸ್ಥೆಗಳಿಗೆ ಪ್ರವೇಶ ನಿಷೇಧ ಅಧಿನಯಮ 1992ರ 3ನೇ ಪ್ರಕರಣದ ಉಲ್ಲಂಘನೆಯಾಗಿದ್ದು ಮೊಕದ್ದಮೆ ಹಡಲು ಅಕರ್ಷಿತವಾಗಿರುತ್ತದೆ.
7. ನಿರ್ಧಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾಥಿಗಳ ಪ್ರವೇಶ ಪಡೆಯುವುದು ಕೆ.ಎಸ್.ಯು ಅಧಿನಿಯಮ 2000ದ 60ನೇ ಪ್ರಕರಣದ ಉಲ್ಲಂಘನೆಯಲ್ಲದೆ ಮೇಲ್ಕಂಡ 1992 ಅಧಿನಿಯಮ 4ನೇ ಪ್ರಕರಣದ ಉಲ್ಲಂಘನೆ ಸಹ ಆಗಿದ್ದು, ಮೊಕದ್ದಮೆ ಹಡಲು ಆಕರ್ಷಿತವಾಗುವುದಲ್ಲದೆ ಸಂಯೋಜನೆ ಹಿಂತೆಗೆದುಕೊಳ್ಳಲು ಸಕಾರಣವಾಗುತ್ತದೆ.
8. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರು ಷರತ್ತುಗಳನ್ನು ಕಟ್ಟು-ನಿಟ್ಟಾಗಿ ಪಾಲಿಸತಕ್ಕದ್ದು.
9. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಭೋಧಕರು ಹಾಗೂ ಭೋಧಕೇತರ ನೌಕರರ ಬಗ್ಗೆ ಕಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತೆ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತ್ತಕ್ಕದ್ದು.
10. ವೈಶಾಕ v/s ರಾಜುಸ್ಥಾನದ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ:13-8-1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ(ಬೋಧಕ/ಬೋಧಕೇತರ/ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ ವಿದ್ಯಾರ್ಥಿನಿಯರಿಗೆ ಮಾವುದೇ ರೀತಿಯ ಕಿರುಕಳ, ಲೈಂಗಿಕ ಕಿರುಕಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ ವಿದ್ಯಾರ್ಥಿದೆಸೆಯಿಂದ ನ್ಯಾಯಲಯದ ಆದೇಶದಂತೆ ದೂರ ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.
11. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಕಾಲೇಜು ಕೋರ್ಸುಗಳ ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಭೋಧಕರುಗಳನ್ನು ಪ್ರಾಂಶುಪಾಲರು/ ಆಡಳಿತಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.
12. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ, ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ

ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ಅವರಿಗೆ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

13. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡುತಕ್ಕದ್ದು. ಈ ಬಗ್ಗೆ ಆ ವರ್ಷದ/ ಸೆಮಿಸ್ಟರ್ನ ಪೂರ್ಣವಾಗದ ಅವಧಿಯ ಭೋದನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲ ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.
14. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.
15. 2018-19ನೇ ಸಾಲಿಗೆ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆ ತಪ್ಪದೆ ಅರ್ಜಿಯನ್ನು ಸಲ್ಲಿಸತಕ್ಕದ್ದು.
16. ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್ *(NAAC)* ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.
17. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

**ಆಜ್ಞೆ ಮೇರೆಗೆ**

ಕುಲಸಚಿವರು

**Registrar**
Bengaluru North University
Tamaka, Kolar-Karnataka-563 103

**ಗೆ,**

*ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.*

**ಪ್ರತಿಗಳು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು-1.
2. ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-1.
3. ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ -563 103.
4. ಕಛೇರಿ ಪ್ರತಿ.